# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎಸ್.ಹೆಚ್.ಮಿಟ್ಟಲಕೋಡ, ವಿಚಾರಣಾಧಿಕಾರಿಗಳು ಹಾಗೂ ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಧಾರವಾಡ - ಸಂಭಾವನೆ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ:-

1. ಸರ್ಕಾರದ ಆದೇಶ ಸಂ. ಸಿಆಸುಇ 45 ಸೇಇವಿ 2014 ದಿನಾಂಕ 08.01.2015.
2. ಸರ್ಕಾರದ ಆದೇಶ ಸಂ. ಗ್ರಾಅಪ 69 ಇಎನ್‌ಕ್ಯೂ 2015 ದಿನಾಂಕ 01.01.2018
3. ವಿಚಾರಣಾಧಿಕಾರಿಯವರ ವರದಿ ದಿನಾಂಕ 27.07.2018

ಪ್ರಸ್ತಾವನೆ:

ಇಲಾಖಾ ವಿಚಾರಣಾ ಪ್ರಕರಣಗಳಲ್ಲಿ ಇಬ್ಬರಿಗಿಂತ ಹೆಚ್ಚು ಆಪಾದಿತರು ಒಳಗೊಂಡಿದ್ದಲ್ಲಿ ಅಂತಹ ಇಲಾಖಾ ವಿಚಾರಣೆಯಲ್ಲಿ ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ. 25,000-00 ಗಳ ಸಂಭಾವನೆಯನ್ನು ಪಾವತಿಸಲು ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ದಿನಾಂಕ. 08.01.2015ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ.

ಬಾಗಲಕೋಟೆ ಜಿಲ್ಲೆಯ ವಿವಿಧ ತಾಲ್ಲೂಕುಗಳ ಕೆರೆಗಳಲ್ಲಿ ಮಣ್ಣಿನ ಗುಣಧರ್ಮದ ಪ್ರಮಾಣ ಪತ್ರಗಳಿಲ್ಲದೆ ಕಾಮಗಾರಿಗಳನ್ನು ಕೈಗೊಂಡು ಗುತ್ತಿಗೆದಾರರಿಗೆ ಹಣ ಪಾವತಿಸಿ ಲೋಪವೆಸಗಿರುತ್ತಾರೆಂಬ ಆರೋಪಕ್ಕೆ ಸಂಬಂಧಿಸಿದಂತೆ ಒಟ್ಟು 6 ಆಪಾದಿತ ಅಧಿಕಾರಿ / ನೌಕರುಗಳ ವಿರುದ್ಧ ವಿವರವಾದ ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು ಶ್ರೀ ಎಸ್.ಹೆಚ್.ಮಿಟ್ಟಲಕೋಡ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಧಾರವಾಡ ಇವರನ್ನು ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ದಿನಾಂಕ. 01.01.2018ರ ಆದೇಶದಲ್ಲಿ ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆ ಜರುಗಿಸಿ ಮೇಲೆ ಕ್ರಮಾಂಕ (3)ರಲ್ಲಿ ಓದಲಾದಂತೆ ದಿನಾಂಕ 27.07.2018ರಂದು ವಿಚಾರಣಾ ವರದಿ ಸಲ್ಲಿಸಿರುತ್ತಾರೆ. ಆದುದರಿಂದ, ವಿಚಾರಣಾಧಿಕಾರಿಗೆ ನಿಯಮಾನುಸಾರ ಸಂಭಾವನೆ / ಭತ್ಯೆ ಮಂಜೂರು ಮಾಡಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ.

ಆದೇಶ ಸಂಖ್ಯೆ ಗ್ರಾಅಪ 69 ಇಎನ್‌ಕ್ಯೂ 2015 ಬೆಂಗಳೂರು, ದಿನಾಂಕ. 25.08.2018

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಎಸ್.ಹೆಚ್.ಮಿಟ್ಟಲಕೋಡ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರು ಸರ್ಕಾರದ ಆದೇಶದಂತೆ ಇಲಾಖಾ ವಿಚಾರಣೆ

ಮು.ತಿ.ನೋ.

ವರದಿ ಸಲ್ಲಿಸಿರುವುದರಿಂದ ಸರ್ಕಾರದ ಆದೇಶ ಸಂ. ಸಿಆಸುಇ 45 ಸೇಇವಿ 2014 ದಿನಾಂಕ 08.01.2015ರ ಅನುಸಾರ ಸಂಚಿತ ಸಂಭಾವನೆ ರೂ. 25,000-00 [( ಇಪ್ಪತ್ತೈದು ಸಾವಿರ ರೂ.ಗಳು ಮಾತ್ರ) / (ವಾಹನ ಭತ್ಯೆಯೂ ಸೇರಿದಂತೆ)] ಗಳನ್ನು ಮಂಜೂರು ಮಾಡಿದೆ. ಸದರಿ ಮೊತ್ತವನ್ನು ಪಾವತಿಸಲು ಕೂಡಲೇ ಕ್ರಮವಹಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಾಗಲಕೋಟೆ ಇವರಿಗೆ ತಿಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

25/08/2018

(ಎಸ್.ರಂಗನಗೌಡ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

25/08

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, (ಆಡಿಟ್ ಮತ್ತು ಅಕೌಂಟ್ಸ್), ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಾಗಲಕೋಟೆ - ಸದರಿ ವಿಚಾರಣಾಧಿಕಾರಿಯವರ ಹೆಸರಿಗೆ ಚೆಕ್‌ನ್ನು ಬರೆದು ಅವರ ವಿಳಾಸಕ್ಕೆ ನೋಂದಣಿ ಅಂಚೆ ಮುಖಾಂತರ ಕಳುಹಿಸುವಂತೆ ಕೋರಿದೆ.
3. ಶ್ರೀ ಸಂಗಪ್ಪ ಹುಚ್ಚಪ್ಪ ಛಿಟ್ಟಲ್ಕೋಡ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ನಂ.ಎಂಐಜಿ-2/78, ಕೆ.ಹೆಚ್.ಬಿ. ಕಾಲೋನಿ, ಡಿ.ಎನ್. ಕೊಪ್ಪ, ಧಾರವಾಡ - 580008. (ಮೊಬೈಲ್ ಸಂಖ್ಯೆ: 9448769634)
4. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಾಗಲಕೋಟೆ.
5. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
6. ಹೆಚ್ಚುವರಿ ಪ್ರತಿ:ರಕ್ಷಾ ಕಡತ: ಕಂಪ್ಯೂಟರ್ ಶಾಖೆ.